# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **608** |
| ಸದಸ್ಯರ ಹೆಸರು | : | ಶ್ರೀ ರಾಮೋಜಿಗೌಡ<br>(ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 09-03-2026 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

****

| | ಪ್ರಶ್ನೆ | ಉತ್ತರ |
|---|---|---|
| ಅ) | ರೆವಿನ್ಯೂ ನಿವೇಶನಗಳಲ್ಲಿ 60*40 ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ನಿರಾಕರಿಸುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ವಿದ್ಯುತ್ ಸಂಪರ್ಕ ಪಡೆಯಲಿಚ್ಛಿಸುವ ಅರ್ಜಿದಾರರು KREC ನಿಯಮಗಳಲ್ಲಿ ಸೂಚಿಸಿರುವ ದಾಖಲೆಗಳ ಜೊತೆಗೆ ಕಟ್ಟಡಕ್ಕೆ ಸಂಬಂಧಿಸಿದ ಸಕ್ಷಮ/ಸ್ಥಳೀಯ ಪ್ರಾಧಿಕಾರದಿಂದ ನೀಡಲ್ಪಟ್ಟ ವಾಸಯೋಗ್ಯ/ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಸಲ್ಲಿಸಿದ್ದಲ್ಲಿ ಸದರಿ ಕಟ್ಟಡ/ನಿವೇಶನಕ್ಕೆ ಕಂಪನಿಗಳ ವತಿಯಿಂದ ವಿದ್ಯುತ್ ಸಂಪರ್ಕವನ್ನು ಕಲ್ಪಿಸಲಾಗುವುದು. |
| ಆ) | ಮಾನವೀಯ ಮತ್ತು ನ್ಯಾಯಯುತ ಆಧಾರದ ಮೇಲೆ ಅಂತಹ ಪ್ರದೇಶಗಳ ನಿವಾಸಿಗಳಿಗೆ ಗೃಹಬಳಕೆಯ ವಿದ್ಯುತ್ ಸಂಪರ್ಕಗಳನ್ನು ಒದಗಿಸುವಂತೆ ಬೆಸ್ಕಾಂ/ಎಸ್ಕಾಂಗೆ ಸೂಚಿಸಲು ಸರ್ಕಾರ ತುರ್ತು ಕ್ರಮಗಳನ್ನು ತೆಗೆದುಕೊಳ್ಳುತ್ತದೆಯೆ | ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ನಗರಾಭಿವೃದ್ಧಿ ಇಲಾಖೆ, ಮತ್ತು ಗ್ರಾಮೀಣಾಭಿವೃದ್ಧಿ ಇಲಾಖೆ ಹೊರಡಿಸಿರುವ ಆದೇಶಗಳನ್ವಯ ರಾಜ್ಯದ ವಿವಿಧ ಪ್ರದೇಶಗಳಲ್ಲಿ 1200 ಚ.ಅಡಿ ವಿಸ್ತೀರ್ಣದವರೆಗಿನ ನಿವೇಶನಗಳಲ್ಲಿ, ನಿರ್ಮಿಸಿರುವ ನೆಲ + 2 ಅಂತಸ್ತು ಅಥವಾ Stilt + 3 ಅಂತಸ್ತಿನವರೆಗಿನ ವಾಸದ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣ ಪತ್ರ (Occupancy certificate)ಪಡೆಯುವುದರಿಂದ ವಿನಾಯಿತಿ ನೀಡುವಂತೆ ಆದೇಶಿಸಲಾಗಿರುತ್ತದೆ. ಸದರಿ ಆದೇಶಗಳಲ್ಲಿ ಸೂಚಿಸಿರುವ ಷರತ್ತುಗಳನ್ನು ಪೂರೈಸುವ ವಸತಿ/ವಾಸದ ಕಟ್ಟಡಗಳಿಗೆ, ಅರ್ಜಿದಾರರಿಂದ ಸ್ವಾಧೀನಾನುಭವ ಪ್ರಮಾಣ ಪತ್ರ ಪಡೆಯದೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗುತ್ತಿದೆ. |
| ಇ) | ರೆವಿನ್ಯೂ ನಿವೇಶನಗಳಲ್ಲಿ ಮೂಲಭೂತ ಸೌಕರ್ಯ ಕಲ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? | ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿನ ಹೆಚ್ಚುತ್ತಿರುವ ವಿದ್ಯುತ್ ಬೇಡಿಕೆಗಳನ್ನು ಸಮರ್ಪಕವಾಗಿ ಪೂರೈಸುವ ಉದ್ದೇಶದಿಂದ, ವಿವರವಾದ ದತ್ತಾಂಶ ಆಧಾರಿತ ಲೋಡ್ ಮುನ್ಸೂಚನೆಗಳ ಪರಿಶೀಲನೆ ಮತ್ತು ವಿಶ್ಲೇಷಣೆಯ ಆಧಾರದ ಮೇಲೆ ವಿದ್ಯುತ್ ಮೂಲಸೌಕರ್ಯವನ್ನು ಯೋಜಿತವಾಗಿ ಅಭಿವೃದ್ಧಿಪಡಿಸಿ, ಅಗತ್ಯವಿರುವಡೆ ವಿದ್ಯುತ್ ವಿತರಣಾ ಜಾಲದ ವಿಸ್ತರಣೆ ಹಾಗೂ ಬಲಪಡಿಸುವ ಕಾಮಗಾರಿಗಳನ್ನು ಕೈಗೊಳ್ಳುತ್ತಿದೆ. |

ಸಂಖ್ಯೆ: ಎನರ್ಜಿ 42 ಇಬಿಎಸ್ 2026

(ಕೆ.ಜೆ.ಜಾರ್ಜ್)
ಇಂಧನ ಸಚಿವರು